ಕರ್ನಾಟಕ ಸರ್ಕಾರ

ಸಂಖ್ಯೆ.ನಲಇ 53 ಬಿಎಂಆರ್ 2013

ಕರ್ನಾಟಕ ಸರ್ಕಾರದ ಸಚಿವಾಲಯ,
4ನೇ ಮಹಡಿ, ವಿಕಾಸಸೌಧ,
ಬೆಂಗಳೂರು, ದಿನಾಂಕ.04-03-2013.

ಇವರಿಂದ:-
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ನಗರಾಭಿವೃದ್ಧಿ ಇಲಾಖೆ,
ಬೆಂಗಳೂರು.

ಇವರಿಗೆ:-
ಮಹಾನಗರ ಆಯುಕ್ತರು,
ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ,
ಬೆಂಗಳೂರು.

ಮಾನ್ಯರೆ,

ವಿಷಯ: ಬೆಂಗಳೂರು ಮಹಾನಗರ ಪ್ರದೇಶ ವ್ಯಾಪ್ತಿಯಲ್ಲಿರುವ ಆನೇಕಲ್, ಹೊಸಕೋಟೆ, ನೆಲಮಂಗಲ, ಮಾಗಡಿ ಮತ್ತು ಕನಕಪುರ ಸ್ಥಳೀಯ ಯೋಜನಾ ಪ್ರದೇಶಗಳಿಗೆ ಮಹಾಯೋಜನೆಯನ್ನು ತಯಾರಿಸುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: BMRDA/ADTP-3/MP-15/2012-13, ದಿನಾಂಕ: 28.01.2013.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಕೋರಿರುವಂತೆ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಬರುವ ಸ್ಥಳೀಯ ಯೋಜನಾ ಪ್ರಾಧಿಕಾರಗಳಾದ ಆನೇಕಲ್, ಹೊಸಕೋಟೆ, ನೆಲಮಂಗಲ, ಮಾಗಡಿ ಮತ್ತು ಕನಕಪುರ ಸ್ಥಳೀಯ ಯೋಜನಾ ಪ್ರಾಧಿಕಾರಗಳು ಮಹಾಯೋಜನೆಯನ್ನು ತಯಾರಿಸಿ ಸಲ್ಲಿಸುವಲ್ಲಿ ವಿಳಂಬವಾಗಿರುವುದರಿಂದ ಹಾಗೂ ರಾಜ್ಯ ಉಚ್ಚ ನ್ಯಾಯಾಲಯಕ್ಕೆ ಸಲ್ಲಿಸಿರುವ ಪ್ರಮಾಣ ಪತ್ರದನ್ವಯ ಕಾಲಾವಕಾಶ ಕಡಿಮೆ ಇರುವ ಕಾರಣ ಸದರಿ ಯೋಜನಾ ಪ್ರಾಧಿಕಾರಗಳಿಗೆ ಮಹಾಯೋಜನೆಯನ್ನು ತಯಾರಿಸಿ ಸಲ್ಲಿಸಲು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 9(2)ರಂತೆ ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರಿಗೆ ಅಧಿಕಾರ ನೀಡಲಾಗಿದೆ ಎಂದು ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ಎಸ್.ಚಂದ್ರಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ.

ಜಿಲ್ಲಾ ಯೋಜನಾ ಪ್ರಾಧಿಕಾರ ಸಂಖ್ಯೆ 1376 ದಿನಾಂಕ 8.3.13 ಹೊಸಕೋಟೆ

8/3/2013

8/3/13